ಕರ್ನಾಟಕ ಸರ್ಕಾರ

ಸಂಖ್ಯೆ:ನಅಇ 478 ಮೈಅಪ್ರಾ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 11.02.2020

7534
15/2/2020

ಇಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

ರವರಿಗೆ:

ರಾಜ್ಯದ ಎಲ್ಲಾ ಸ್ಥಳೀಯ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು,

ಮಾನ್ಯರೇ,

ವಿಷಯ: ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡು ಮಹಾಯೋಜನೆ ತಯಾರಿಸದೇ ಇರುವ / ಪ್ರಗತಿಯಲ್ಲಿರುವ ಪ್ರದೇಶಗಳಲ್ಲಿ ಮಹಾಯೋಜನೆ ಅಂತಿಮ ಅನುಮೋದನೆಯಾಗುವವರೆಗೆ ಭೂ ಪರಿವರ್ತನೆಗೆ ನಿರಾಕ್ಷೇಪಣಾ ಪತ್ರ ನೀಡುವುದನ್ನು ನಿಲ್ಲಿಸುವ ಬಗ್ಗೆ.

ಉಲ್ಲೇಖ: ದಿನಾಂಕ: 15.07.2019 ರಂದು ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.

~*~*~*~*~

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಹೊಸದಾಗಿ ಘೋಷಣೆಗೊಂಡ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡು ಮಹಾಯೋಜನೆ ತಯಾರಿಸದೇ ಇರುವ / ಪ್ರಗತಿಯಲ್ಲಿರುವ ಪ್ರದೇಶಗಳಿಗೆ ಭೂ ಪರಿವರ್ತನೆಗೆ ಅಭಿಪ್ರಾಯ ನೀಡುವ ಬಗ್ಗೆ ಚರ್ಚಿಸಲಾಗಿ, ಹೊಸ ಅಭಿವೃದ್ಧಿಗಳಿಗೆ ಅನುಮತಿ ನೀಡುವ ಪ್ರಕ್ರಿಯೆಯನ್ನು ತಡೆಯದೇ ಇದ್ದಲ್ಲಿ ಮಹಾಯೋಜನೆಯ ತಯಾರಿಕೆಗೆ ತೊಂದರೆಯಾಗುವುದರಿಂದ ಮಹಾಯೋಜನೆ ಅಂತಿಮ ಅನುಮೋದನೆಯಾಗುವವರೆಗೆ ಭೂ ಪರಿವರ್ತನೆಗೆ ನಿರಾಕ್ಷೇಪಣೆ ಪತ್ರ ನೀಡುವುದು ಸೂಕ್ತವಲ್ಲವೆಂದು ದಿನಾಂಕ: 15.07.2019 ರಂದು ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಇದರಿಂದ ಸಾರ್ವಜನಿಕರಿಗೆ ಆಗುವ ಅನಾನುಕೂಲತೆಯನ್ನು ತಡೆಯುವ ನಿಟ್ಟಿನಲ್ಲಿ ಆದ್ಯತೆಯ ಮೇಲೆ ಸ್ಥಳೀಯ ಯೋಜನಾ ಪ್ರದೇಶಗಳ ಮಹಾಯೋಜನೆ ತಯಾರಿಸಿ, ಯೋಜನಾ ಪ್ರಾಧಿಕಾರ ರಚನೆಯಾದ 2 ವರ್ಷಗಳೊಳಗಾಗಿ ಮಹಾಯೋಜನೆಯನ್ನು ಸರ್ಕಾರದ ಅನುಮೋದನೆಗೆ ಸಲ್ಲಿಸಲು ಸಂಬಂಧಿಸಿದ ಪ್ರಾಧಿಕಾರಗಳು ಕಟ್ಟುನಿಟ್ಟಿನ ಕ್ರಮವಹಿಸತಕ್ಕದ್ದು ಎಂದು ತೀರ್ಮಾನಿಸಲಾಗಿದೆ.

ಮೇಲಿನ ತೀರ್ಮಾನದ ಹಿನ್ನೆಲೆಯಲ್ಲಿ, ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡು ಮಹಾಯೋಜನೆ ತಯಾರಿಸದೇ ಇರುವ / ಪ್ರಗತಿಯಲ್ಲಿರುವ ಪ್ರದೇಶಗಳಲ್ಲಿ ಮಹಾಯೋಜನೆ ಅಂತಿಮ ಅನುಮೋದನೆಯಾಗುವವರೆಗೆ ಭೂ ಪರಿವರ್ತನೆಗೆ ನಿರಾಕ್ಷೇಪಣಾ ಪತ್ರ ನೀಡುವುದನ್ನು ನಿಲ್ಲಿಸಿ, ಸ್ಥಳೀಯ ಯೋಜನಾ ಪ್ರದೇಶ ಘೋಷಣೆಗೊಂಡ ಸಂಬಂಧಿಸಿದ ಸ್ಥಳೀಯ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆಯಾ ಯೋಜನಾ ಪ್ರಾಧಿಕಾರಗಳ ಮಹಾಯೋಜನೆ ತಯಾರಿಸಿ ಸರ್ಕಾರದ ಅನುಮೋದನೆ ಪಡೆಯಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಸಿ.ಎಸ್. ಶಿವಕುಮಾರಸ್ವಾಮಿ) 11/2
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ & ನಯೋಸೇ)
ನಗರಾಭಿವೃದ್ಧಿ ಇಲಾಖೆ.

13/2/20 13/2

ATP-7
14/2/20

ಪ್ರತಿ:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸದಸ್ಯ ಕಾರ್ಯದರ್ಶಿ, ಮೂಡಬಿದ್ರೆ ಯೋಜನಾ ಪ್ರಾಧಿಕಾರ, ಮೂಡಬಿದ್ರೆ, ದಕ್ಷಿಣ ಕನ್ನಡ ಜಿಲ್ಲೆ.
3. ಶಾಖಾ ರಕ್ಷ ಕಡತ.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯ
ಕರ್ನಾಟಕ ಸರ್ಕಾರ
ಬಹುಮಹಡಿಗಳಕಟ್ಟಡ, ಗೇಟ್-4
ಅ.ಪೆ. ಸಂ. 5257
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು-560 001
ದೂರವಾಣಿ ಸಂ.: 080-22256988



ಸಂಖ್ಯೆ: ನಗ್ರಾಯೋ:ಜಂನಿ:19:CIRC:2019–20
ಸರ್ಕಾರದ ಪತ್ರ ಸಂಖ್ಯೆ:ನಅಇ 478 ಮೈಅಪ್ರಾ 2015,
ಬೆಂಗಳೂರು, ದಿನಾಂಕ:11–02–2020.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: 18 FEB 2020

<u>ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.</u>

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
5. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
6. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
7. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
8. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ತಾಂತ್ರಿಕ ವಿಭಾಗದ ಇ-ಮೇಲ್ ವಿಷಯ ನಿರ್ವಾಹಕರಿಗೆ.
10. ಹೆಚ್ಚುವರಿ ಪ್ರತಿಗಳು.

18/2/20.
ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

o/c